# Bangalore
# Regional News
# 09.04.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಉಪಚುನಾವಣೆ; ಬಾಗಲಕೋಟೆಯಲ್ಲಿ ಶೇಕಡ 65.68, ದಾವಣಗೆರೆ ದಕ್ಷಿಣದಲ್ಲಿ ಶೇಕಡ 63.04ರಷ್ಟು ಮತದಾನ
2. ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ; ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ದಿಶಾಗೆ 600ಕ್ಕೆ 600 ಅಂಕ
3. ಕಾರ್ಯನಿರ್ವಹಿಸದ ಉಪವಿಭಾಗಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮ – ಕಂದಾಯ ಸಚಿವ ಕೃಷ್ಣ ಬೈರೇಗೌಡ ಎಚ್ಚರಿಕೆ
4. ಒಂದು ಸಾವಿರ ಸಬ್ ಇನ್ಸ್‌ಪೆಕ್ಟರ್‌ಗಳು, 8 ಸಾವಿರ ಪೊಲೀಸ್ ಪೇದೆಗಳ ನೇಮಕಕ್ಕೆ ಸರ್ಕಾರ ನಿರ್ಧಾರ
5. ಭಾರತೀಯ ಸೇನೆಯಲ್ಲಿ ಥಿಯೇಟರ್ ಕಮಾಂಡ್ ಪರಿಕಲ್ಪನೆ; ಬೆಂಗಳೂರಿನಲ್ಲಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಸ್ಪಷ್ಟನೆ

***************

ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಭಾ ಕ್ಷೇತ್ರಗಳ ಉಪ ಚುನಾವಣೆಯ ಮತದಾನ ಶಾಂತಿಯುತವಾಗಿ ಮುಕ್ತಾಯಗೊಂಡಿದೆ.

ಚುನಾವಣಾ ಆಯೋಗದ ಮಾಹಿತಿ ಅನ್ವಯ ಸಂಜೆ 5 ಗಂಟೆಯವರೆಗೆ ಬಾಗಲಕೋಟೆಯಲ್ಲಿ ಶೇಕಡ 65.68ರಷ್ಟು ಮತ್ತು ದಾವಣಗೆರೆ ದಕ್ಷಿಣದಲ್ಲಿ ಶೇಕಡ 63.04ರಷ್ಟು ಮತದಾನವಾಗಿದೆ.

***************

ಲಕ್ಷಾಂತರ ವಿದ್ಯಾರ್ಥಿಗಳು ಕಾತರದಿಂದ ಕಾಯುತ್ತಿದ್ದ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಈ ಬಾರಿ ಫಲಿತಾಂಶದಲ್ಲಿ ದಾಖಲೆಯ ಹೆಚ್ಚಳವಾಗಿದೆ. ಕಳೆದ ವರ್ಷಕ್ಕಿಂತ ಶೇಕಡ 12 ರಷ್ಟು ಹೆಚ್ಚು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

7 ಲಕ್ಷದ 10 ಸಾವಿರ 363 ವಿದ್ಯಾರ್ಥಿಗಳ ಪೈಕಿ 6 ಲಕ್ಷದ 10 ಸಾವಿರ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷ ಶೇಕಡ 73.45ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದರು. ಇದರೊಂದಿಗೆ ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ಭಾರೀ ಸುಧಾರಣೆ ಕಂಡು ಬಂದಿದೆ.

ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ 600 ಅಂಕಗಳಿಗೆ 600 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಆಕಾಶವಾಣಿಯೊಂದಿಗೆ ದಿಶಾ ಸಂತಸ ಹಂಚಿಕೊಂಡಿದ್ದಾರೆ.

*****ಧ್ವನಿ****ದಿಶಾ

ಕಲಾ ವಿಭಾಗದಲ್ಲಿ ಕೊಟ್ಟೂರಿನ ಇಂದು ಪಿಯು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಸಂಗೀತ ಹಾಗೂ ಅರ್ಚನಾ ತಲಾ 598 ಅಂಕ ಪಡೆಯುವ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ತಮ್ಮ ಸಾಧನೆ ಬಗ್ಗೆ ಆಕಾಶವಾಣಿಯೊಂದಿಗೆ ಅರ್ಚನಾ ಮಾಹಿತಿ ಹಂಚಿಕೊಂಡಿದ್ದಾರೆ.

*****ಧ್ವನಿ*** ಅರ್ಚನಾ

ವಿಜ್ಞಾನ ವಿಭಾಗದಲ್ಲಿ ಮಂಗಳೂರಿನ ಎಕ್ಸ್‌ಪರ್ಟ್ ಕಾಲೇಜಿನ ಇಬ್ಬರು ವಿದ್ಯಾರ್ಥಿಗಳಾದ ನಂದನ್ ನಾಯಕ್ ಹಾಗೂ ಸಮನ್ಯು ಎಸ್. ಶೆಟ್ಟಿ 600ಕ್ಕೆ 598 ಅಂಕ ಗಳಿಸಿ ದಾಖಲೆ ಬರೆದಿದ್ದಾರೆ. ತಮ್ಮ ಸಾಧನೆಯ ಬಗ್ಗೆ ಸಂತಸ ಹಂಚಿಕೊಂಡಿರುವ ಸಮನ್ಯು ಎಸ್. ಶೆಟ್ಟಿ ನಿರಂತರ ಓದು, ಉಪನ್ಯಾಸಕರ ನಿರಂತರ ಪ್ರೋತ್ಸಾಹದಿಂದ ಉತ್ತಮ ಅಂಕಗಳಿಸಲು ಸಾಧ್ಯವಾಯಿತು ಎಂದು ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

*****ಧ್ವನಿ***** ಸಮನ್ಯು ಎಸ್. ಶೆಟ್ಟಿ

***************

ರಾಜ್ಯದಲ್ಲಿನ ಎಸಿ ನ್ಯಾಯಾಲಯದಲ್ಲಿನ ಅವಧಿ ಮೀರಿದ ಶೇಕಡ 80ಕ್ಕೂ ಹೆಚ್ಚು ಬಾಕಿ ಪ್ರಕರಣಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.
ಬೆಂಗಳೂರಿನಲ್ಲಿಂದು ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮೂರು ವರ್ಷದ ಹಿಂದೆ ಅವಧಿ ಮೀರಿದ 73 ಸಾವಿರದ 624 ಪ್ರಕರಣಗಳಿದ್ದು, ಇದೀಗ ಅದನ್ನು 9 ಸಾವಿರದ 24ಕ್ಕೆ ಇಳಿಸಲಾಗಿದೆ ಎಂದು ಹೇಳಿದ್ದಾರೆ.
ತುಮಕೂರಿನಲ್ಲಿ ಅತಿ ಹೆಚ್ಚು ಪ್ರಕರಣ ಬಾಕಿ ಇದ್ದು, ಅರ್ಹ ಪ್ರಕರಣಗಳನ್ನು ಮಾತ್ರ ದಾಖಲಿಸಿಕೊಳ್ಳಲು ಉಪವಿಭಾಗಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.
ಜೂನ್ ತಿಂಗಳೊಳಗೆ ರಾಜ್ಯದ ಯಾವ ಉಪವಿಭಾಗಾಧಿಕಾರಿ ಬಳಿಯು ಪ್ರಕರಣಗಳು ಇರುವಂತಿಲ್ಲ ಎಂದು ಸೂಚನೆ ನೀಡಿದ್ದಾರೆ. ಕಾರ್ಯ ನಿರ್ವಹಿಸದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮದ ಎಚ್ಚರಿಕೆ ನೀಡಿದ್ದಾರೆ.

***************

ಪೊಲೀಸ್ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದ್ದು, ರಾಜ್ಯದಲ್ಲಿ ಒಂದು ಸಾವಿರ ಸಬ್‌ಇನ್ಸ್‌ಪೆಕ್ಟರ್‌ಗಳು ಹಾಗೂ 8 ಸಾವಿರ ಪೊಲೀಸ್ ಪೇದೆಗಳನ್ನು ನೇಮಕ ಮಾಡಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ
ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ಆವತಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ಆರಂಭಿಸಲಾಗಿರುವ ಭಾರತ ಮೀಸಲು ಪಡೆ ಘಟಕದ ಶಂಕುಸ್ಥಾಪನಾ ಸಮಾರಂಭದಲ್ಲಿ ಮಾತನಾಡಿದ ಅವರು, ಬೆಂಗಳೂರು ದಕ್ಷಿಣ ಭಾಗದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ 568 ಕೋಟಿ ರೂಪಾಯಿಗಳ ಯೋಜನೆಯಡಿಯಲ್ಲಿ ಈ ಘಟಕ ಸ್ಥಾಪಿಸಲಾಗುತ್ತಿದ್ದು, ಇಲ್ಲಿ ಒಂದು ಸಾವಿರಕ್ಕೂ ಹೆಚ್ಚು ಸಿಬ್ಬಂದಿ ತರಬೇತಿ ಪಡೆಯಲಿದ್ದಾರೆ ಎಂದು ತಿಳಿಸಿದ್ದಾರೆ.

***************

ರಕ್ಷಣಾ ಪಡೆಗಳ ಮೂರು ವಿಭಾಗಗಳಾದ ಸೇನೆ, ವಾಯು ಮತ್ತು ನೌಕಾಪಡೆ ಸಮನ್ವಯದೊಂದಿಗೆ ಯುದ್ಧ ಮಾಡಬಲ್ಲ ಸಂಯುಕ್ತ ಶಕ್ತಿಯಾಗಿ ರೂಪುಗೊಳ್ಳಲು ಥಿಯೇಟರ್ ಕಮಾಂಡ್ ಪರಿಕಲ್ಪನೆ ಮಾಡಲಾಗಿದೆ. ಇದಕ್ಕೆ ಒಂದು ರೂಪ ನೀಡಲಾಗುತ್ತಿದ್ದು, ಶೀಘ್ರವೇ ಅಸ್ತಿತ್ವಕ್ಕೆ ಬರಲಿದೆ ಎಂದು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ತಿಳಿಸಿದ್ದಾರೆ.
ಬೆಂಗಳೂರಿನಲ್ಲಿ ಆರಂಭವಾದ ರಣ್ ಸಂವಾದ್ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಸ್ವರೂಪ ಅಸ್ತಿತ್ವಕ್ಕೆ ಬಂದ ಬಳಿಕ ರಕ್ಷಣಾ ಪಡೆಗಳು ಒಂದಕ್ಕೊಂದು ಪೂರಕವಾಗಿ ಶಸ್ತ್ರಾಭ್ಯಾಸ ಮಾಡಲಿದ್ದು, ತರಬೇತಿ ಪಠ್ಯವನ್ನು ಇದಕ್ಕೆ ಅನುರೂಪವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದ್ದಾರೆ.
ರುದ್ರ ಮತ್ತು ಭೈರವ್ ಸೇನಾ ತುಕಡಿಗಳು ಈಗಾಗಲೇ ಇಂತಹ ಸಂಯುಕ್ತ ಸಾಮರ್ಥ್ಯವನ್ನು ಹೊಂದಿದೆ ಎಂದು ತಿಳಿಸಿದ್ದಾರೆ.
****ಧ್ವನಿ****ಉಪೇಂದ್ರ ದ್ವಿವೇದಿ
ಈ ಸಂದರ್ಭದಲ್ಲಿ ಮಾತನಾಡಿದ ನೌಕಾಪಡೆ ಮುಖ್ಯಸ್ಥರಾದ ಅಡ್ಮಿರಲ್ ದಿನೇಶ್ ಕುಮಾರ್ ತ್ರಿಪಾಠಿ, ಸಾಂಪ್ರದಾಯಿಕ ಯುದ್ಧ ಕೌಶಲ್ಯದ ಜೊತೆಗೆ ಪೈಲಟ್ ರಹಿತ ಯುದ್ಧ ವಿಮಾನ ಬಳಕೆ, ಉಪಗ್ರಹ ಆಧಾರಿತ ಸಂವಹನ ವ್ಯವಸ್ಥೆ ಹಾಗೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಬಳಸುವ ಸಾಮರ್ಥ್ಯ ಪಡೆಯಲಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯ ಸರ್ಕಾರ ರೈತರ ಅಭ್ಯುದಯಕ್ಕೆ ಬದ್ಧವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.
ಕಲಬುರಗಿಯ ಚಿತ್ತಾಪುರದಲ್ಲಿ 2025-26ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ತೋಟಗಾರಿಕಾ ಇಲಾಖೆಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ತರಕಾರಿ ಬೀಜಗಳ ಕಿಟ್ ವಿತರಿಸಿ ಅವರು ಮಾತನಾಡಿದರು.
ಸರ್ಕಾರ ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡುವ ಗುರಿ ಹೊಂದಿದ್ದು, ಮುಂಬರುವ ದಿನಗಳಲ್ಲಿ ರೈತರಿಗೆ ಮತ್ತಷ್ಟು ಸುಧಾರಿತ ಯಂತ್ರಗಳನ್ನು ಒದಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ರಾಜ್ಯದ ನೋಂದಣಿ ಇಲಾಖೆಯ ಆಡಳಿತ ವ್ಯವಸ್ಥೆ ಸುಧಾರಿಸಲು ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಕೋಲಾರ ತಾಲೂಕಿನ ವೇಮಗಲ್‌ನಲ್ಲಿ ನೂತನ ಉಪ ನೋಂದಣಿ ಕಚೇರಿ ಸ್ಥಾಪಿಸಲು ನಿರ್ಧರಿಸಿದೆ.

ಏಪ್ರಿಲ್ 8 ರಂದು ಅಧಿಕೃತ ಆದೇಶ ಹೊರಡಿಸಿರುವ ಸರ್ಕಾರ, ವೇಮಗಲ್‌ನಲ್ಲಿ ಸಬ್‌ರಿಜಿಸ್ಟ್ರಾರ್ ಕಚೇರಿ ಆರಂಭಕ್ಕೆ ಸೂಚಿಸಿದೆ. ವೇಮಗಲ್ ಸಬ್ ರಿಜಿಸ್ಟ್ರಾರ್ ಕಚೇರಿ ಸ್ಥಾಪನೆಯಿಂದ ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ನೋಂದಣಿ ಸೇವೆಗಳು ಸುಲಭವಾಗಿ ಲಭ್ಯವಾಗಲಿದ್ದು, ಕೋಲಾರ ಕಚೇರಿ ಮೇಲಿನ ಒತ್ತಡವೂ ಕಡಿಮೆಯಾಗಲಿದೆ.

*******ಮುಕ್ತಾಯ*******